**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾ. ದಂಡಾಧಿಕಾರಿಗಳು, ಕೃಷ್ಣರಾಜಪೇಟೆ.**

**ಮೊಕದ್ದಮೆ ಸಂಖ್ಯೆ: ಪಿ.ಸಿ.ಆರ್. 136/2026**

**ಪಿ.ಡಬ್ಲ್ಯು.1**

**ದಿನಾಂಕ: 06.07.2026** **ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಪಿರ್ಯಾದುದಾರರ ಪರ ಶ್ರೀ ಕೆ.ಆರ್.ಐ. ವಕೀಲರಿಂದ**

ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಚಾರಗಳು ಸತ್ಯವಾಗಿರುತ್ತವೆ. ಪ್ರಮಾಣ ಪತ್ರಕ್ಕೆ ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

1) ನಾನು ದಿನಾಂಕ: 02.03.2026 ರ ಬ್ಯಾಂಕ್ ಆಫ್ ಬರೋಡ ಚೆಕ್ ನಂ. 000008 ಚೆಕ್ಕನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು, ಅದರಲ್ಲಿರುವ ಆರೋಪಿಯ ಸಹಿಯನ್ನು ನಿಪಿ-1(ಎ) ಎಂದು,

2) ಒಂದು ಚಲನ್ ಹಾಜರುಪಡಿಸಿರುತ್ತೇನೆ. ಅದನ್ನು ಅದನ್ನು ನಿಪಿ-2 ಎಂದು,

3). ಬ್ಯಾಂಕ್‌ನ ದಿ: 10.03.2026 ರ ಹಿಂಬರಹವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು,

4) ದಿನಾಂಕ 25.03.2026 ರಂದು ನಾನು ನನ್ನ ವಕೀಲರ ಮೂಲಕ ಆರೋಪಿಗೆ ನೀಡಿರುವ ನೋಟಿಸ್ಸಿನ ಕಚೇರಿಯ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ4 ಎಂದು,

5) ಅಂಚೆ ರಶೀದಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-5 ಎಂದು,

6) ಆರೋಪಿಗೆ ಕಳುಹಿಸಿದ ನೋಟಿಸ್ಸು ಜಾರಿಯಾಗದೆ ವಾಪಾಸ್ಸು ಬಂದಿರುವ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಆದ್ದರಿಂದ ನನ್ನ ಪರವಾಗಿ ಪ್ರಕರಣವನ್ನು ಇತ್ಯರ್ಥಪಡಿಸಬೇಕೆಂದು ಕೋರಿಕೊಳ್ಳುತ್ತೇನೆ.

**(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)**.

**ಓ.ಹೇ.ಕೇ. ಸರಿ ಇದೆ.**

**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರದನ್ಯಾ. ದಂಡಾಧಿಕಾರಿಗಳು, ಕೃಷ್ಣರಾಜಪೇಟೆ.**